ವಿಷಯ : ಹರಪನಹಳ್ಳಿ ತಾಲ್ಲೂಕಿನಲ್ಲಿ ಅಗ್ನಿಶಾಮಕ ದಳ ಮಂಜೂರು ಮಾಡುವುದು

ಪ್ರ. ಸಂಖ್ಯೆ 523 (1215) ಶ್ರೀ ಬಿ. ಹೆಚ್. ಯಂಕನಾಯಕ್ (ಹರಪನಹಳ್ಳಿ) ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ವಿಷಯಗಳಿಗೆ ದಯೆಯಿಟ್ಟು ಉತ್ತರಿಸುವರೆ ?

ಹರಪನಹಳ್ಳಿ ತಾಲ್ಲೂಕಿನಲ್ಲಿ ಅಗ್ನಿಶಾಮಕ ದಳದ ಜುರೂರು ಅವಶ್ಯಕತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ? ಹಾಗಿದ್ದಲ್ಲಿ ಅದನ್ನು ಯಾವಾಗ ಒದಗಿಸಲಾಗುವುದು?

ಶ್ರೀ ರಾಮಕೃಷ್ಣ ಹೆಗಡೆ (ಮುಖ್ಯ ಮಂತ್ರಿಗಳು).—

ಸರ್ಕಾರವು ಮೂರು ಹಂತಗಳಲ್ಲಿ ಅಗ್ನಿ ಶಾಮಕ ಠಾಣೆಗಳನ್ನು ತೆರೆಯಲು ತೀರ್ಮಾನ ಕೈಗೊಂಡಿದೆ. ಅಗ್ನಿಶಾಮಕ ಠಾಣೆಗಳನ್ನು ಜಿಲ್ಲಾ ಕೇಂದ್ರಗಳಲ್ಲಿ ಮೊದಲು ತೆರೆಯಲಾಗುವುದು. ಎರಡನೇ ಹಂತದಲ್ಲಿ ಉಪ ವಿಭಾಗ ಕೇಂದ್ರದಲ್ಲಿ ತೆರೆಯಲಾಗುವುದು. ಮೂರನೆಯ ಹಂತದಲ್ಲಿ ಧಾರವಾಡ, ಬಿಜಾಪುರ, ಬೆಳಗಾಂ ಮತ್ತು ಕಾರವಾರ ಜಿಲ್ಲೆಗಳಲ್ಲಿ ಹಾಲಿ ಇರತಕ್ಕ ಸ್ಥಳೀಯ ಸಂಸ್ಥೆಗಳು ನಡೆಸುತ್ತಿರುವ ಅಗ್ನಿಶಾಮಕ ಠಾಣೆಗಳನ್ನು ಸರ್ಕಾರದ ವಶಕ್ಕೆ ತೆಗೆದುಕೊಳ್ಳಲಾಗುವುದು. ಇದು ಸರ್ಕಾರವು ಅಗ್ನಿಶಾಮಕ ಠಾಣೆಗಳನ್ನು ಸ್ಥಾಪಿಸಲು ಅನುಸರಿಸುತ್ತಿರುವ ಸಾಮಾನ್ಯ ನೀತಿಯಾಗಿದೆ.

ಬಳ್ಳಾರಿ ಜಿಲ್ಲೆಯಲ್ಲಿ ಈಗಾಗಲೇ ಬಳ್ಳಾರಿ, ಹೊಸಪೇಟೆ ಮತ್ತು ಸಂಡೂರುಗಳಲ್ಲಿ ಅಗ್ನಿಶಾಮಕ ಠಾಣೆಗಳಿರುವುದರಿಂದ ಹರಪ್ಪನ ಹಳ್ಳಿಯಲ್ಲಿ ಅಗ್ನಿಶಾಮಕ ಠಾಣೆಯನ್ನು ತೆರೆಯಲು ಸದ್ಯಕ್ಕೆ ಸಾಧ್ಯವಾಗುವುದಿಲ್ಲ.

ವಿಷಯ : ದಕ್ಷಿಣ ಕನ್ನಡ ಜಿಲ್ಲೆಯ ಆರೋಗ್ಯ ಘಟಕಗಳ ಕಾರ್ಯನಿರ್ವಹಣೆ

ಪ್ರ. ಸಂಖ್ಯೆ 533 (1363) ಶ್ರೀ ವಸಂತ ವಿ. ಸಾಲ್ಯಾನ (ಕಾಪು) ಮಾನ್ಯ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ ?

ಅ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ತಾಲ್ಲೂಕು ಅಭಿವೃದ್ಧಿ ಮಂಡಳಿವತಿಯಿಂದ ನಡೆಯುತ್ತಿರುವ ಆರೋಗ್ಯ ಘಟಕಗಳ ಸಂಖ್ಯೆ ಎಷ್ಟು ;

ಆ. ಇವುಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿವೆಯೇ ;

ಇ. ಕಾಪು ಕ್ಷೇತ್ರದ ಶಿವನ ಗ್ರಾಮದಲ್ಲಿ ಆರೋಗ್ಯ ಘಟಕವಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ;

ಈ. ಅದರಲ್ಲಿರುವ ವೈದ್ಯರ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ;

ಉ. ಸದರಿ ಘಟಕದಿಂದ ಜನರಿಗೆ ಪ್ರಯೋಜನವಾಗುವ ಬದಲು ತೊಂದರೆಯಾಗುತ್ತಿರುವ ವಿಷಯ ಸರಕಾರದವರ ಗಮನಕ್ಕೆ ಬಂದಿದೆಯೇ ?

ಶ್ರೀ ಪಿ. ಜಿ. ಆರ್. ಸಿಂಧ್ಯ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರಾಜ್ಯ ಸಚಿವರು).—

ಅ. ಯಾವವೂ ಇಲ್ಲ.

ಆ. ಉದ್ಭವಿಸುವುದಿಲ್ಲ.

ಇ. ಕಾಪು ಕ್ಷೇತ್ರದಲ್ಲಿ ಶಿವನಗ್ರಾಮ ಎಂಬುದು ಇರುವುದಿಲ್ಲ.

ಈ. ಉದ್ಭವಿಸುವುದಿಲ್ಲ.

ಉ. ಉದ್ಭವಿಸುವುದಿಲ್ಲ.

ವಿಷಯ : ಸಾಗರ ಸಾರ್ವಜನಿಕ ಆಸ್ಪತ್ರೆ

ಪ್ರಶ್ನೆ ಸಂಖ್ಯೆ 534 (1287) ಶ್ರೀ ಟಿ. ತಿಮ್ಮಪ್ಪ ಹೆಗಡೆ (ಸಾಗರ).—ಮಾನ್ಯ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ. ಸಾಗರ ಸಾರ್ವಜನಿಕ ಆಸ್ಪತ್ರೆಯ ಕಟ್ಟಡದ ಕೆಲವು ಭಾಗಗಳಲ್ಲಿ ಮಳೆಗಾಲದಲ್ಲಿ ಸೋರುತ್ತಿದ್ದು ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? ಹಾಗಿದ್ದಲ್ಲಿ ಸರ್ಕಾರದವರು ಈ ಬಗ್ಗೆ ತೆಗೆದುಕೊಂಡ ಕ್ರಮವೇನು ;

ಆ. ಈ ಹಳೆಯ ಕಟ್ಟಡದ ಸ್ಥಳದಲ್ಲಿ ಹೊಸ ಕಟ್ಟಡ ಕಟ್ಟಿಸಲು ಯಾವಾಗ ಕ್ರಮ ತೆಗೆದುಕೊಳ್ಳಲಾಗುವುದು ಮತ್ತು ಒಳರೋಗಿಗಳ ಸಂಖ್ಯೆಗನುಗುಣವಾಗಿ ಪ್ರಸ್ತುತ ಇರುವ ಕಟ್ಟಡದಲ್ಲಿ ಸ್ಥಳಾವಕಾಶ ವಿಲ್ಲದಿರುವುದನ್ನು ಸರ್ಕಾರದವರು ಗಮನಿಸಿರುವರೆ ;

ಇ. ನೀರು ಪೂರೈಕೆ ಕೂಡ ಸರಿಯಾಗಿಲ್ಲದೆ ಆಸ್ಪತ್ರೆ ನೈರ್ಮಲ್ಯ ಹಾಳಾಗಿರುವುದನ್ನು ಗಮನಿಸಲಾಗಿದೆಯೇ ? ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ತೆಗೆದುಕೊಂಡ ಕ್ರಮವೇನು ?

ಶ್ರೀ ಪಿ. ಜಿ. ಆರ್. ಸಿಂಧ್ಯ (ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ರಾಜ್ಯ ಮಂತ್ರಿಗಳು).—

ಅ. ಬಂದಿದೆ. ಇದರ ದುರಸ್ತಿ ಕಾರ್ಯಕೈಗೊಳ್ಳಲು ಮಂಜೂರಾತಿಯನ್ನು ಕೊಟ್ಟಿದೆ.